## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 584 |
| ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್ |
| ಉತ್ತರಿಸುವ ದಿನಾಂಕ | : | 23.12.2022 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು 2021-22ನೇ ಶೈಕ್ಷಣಿಕ ಸಾಲಿನಿಂದ ವೈದ್ಯಕೀಯ/ಇಂಜಿನೀಯರಿಂಗ್ ಕೋರ್ಸ್‌ಗಳಿಗೆ ಮ್ಯಾನೇಜ್‌ಮೆಂಟ್ ಕೋಟಾದಲ್ಲಿ ಆಯ್ಕೆಯಾದಲ್ಲಿ ಶುಲ್ಕ ವಿನಾಯತಿ ನೀಡದಿರಲು ಕಾರಣವೇನು; | 2018-19ನೇ ಸಾಲಿನ ಪೂರ್ವದ ವರ್ಷಗಳಲ್ಲಿ ಮ್ಯಾನೇಜ್‌ಮೆಂಟ್ ಕೋಟಾದಲ್ಲಿ ಆಯ್ಕೆಯಾಗಿ ವ್ಯಾಸಂಗ ಮುಂದುವರೆಸುತ್ತಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಾತ್ರ ಅವರ ಪ್ರಸ್ತುತ ಕೋರ್ಸ್ ಮುಕ್ತಾಯದವರೆಗೆ ಆದೇಶ ಸಂಖ್ಯೆ:ಸಕಇ 288 ಪಕವಿ 2017, ದಿನಾಂಕ:24.04.2017 ಮತ್ತು ಸರ್ಕಾರಿ ಆದೇಶ ಸಂಖ್ಯೆ:ಸಕಇ 205 ಪವಯೋ 2017, ದಿನಾಂಕ:17.06.2017ರನ್ವಯ ನಿಗಧಿಪಡಿಸಿದ ಶುಲ್ಕ ಪಾವತಿಸಲು ಆದೇಶಿಸಲಾಗಿದೆ.<br><br>ಸರ್ಕಾರಿ ಆದೇಶ ಸಂಖ್ಯೆ:ಸಕಇ 322 ಪಕವಿ 2020, ದಿನಾಂಕ:29.08.2020ರಲ್ಲಿ 2018-19ನೇ ಸಾಲಿನಿಂದ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕಗಳನ್ನು ಪಾವತಿಸಬಾರದೆಂದು ಆದೇಶಿಸಲಾಗಿದೆ.<br><br>ಮುಂದುವರೆದು, ಸರ್ಕಾರಿ ಆದೇಶ ಸಂಖ್ಯೆ:ಸಕಇ 322 ಪಕವಿ 2020, ದಿನಾಂಕ:29.03.2021ರಲ್ಲಿ 2018-19 ಮತ್ತು 2019-20ನೇ ಸಾಲಿನಲ್ಲಿ ಖಾಸಗಿ ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ಕೋರ್ಸ್ ಗಳಲ್ಲಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದೊಳಗೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಆಡಳಿತ ಮಂಡಳಿ ಕೋಟಾದಡಿ ಪ್ರವೇಶ ಪಡೆದಿದ್ದಲ್ಲಿ, ಸದರಿ ವಿದ್ಯಾರ್ಥಿಗಳಿಗೆ ಅವರ ಕೋರ್ಸ್ ಮುಕ್ತಾಯವಾಗುವವರೆಗೆ ಈ ಹಿಂದಿನ ವರ್ಷಗಳಲ್ಲಿ ನೀಡಿರುವಂತೆ, ಸರ್ಕಾರ/ವಿಶ್ವವಿದ್ಯಾನಿಲಯಗಳು ನಿಗಧಿಪಡಿಸಿದ ಕಡ್ಡಾಯ ಶುಲ್ಕ ಸೇರಿದಂತೆ (ಅಭಿವೃದ್ಧಿ ಶುಲ್ಕ ಹೊರತುಪಡಿಸಿ) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಾವತಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಪರಿಷ್ಕರಿಸಿ ಆದೇಶಿಸಲಾಗಿದೆ.<br><br>**ಷರತ್ತುಗಳು:**<br>1. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆಯಲು ನಿಗದಿಪಡಿಸಿರುವ ಆದಾಯ ಮಿತಿ ಹಾಗೂ ಇತರೆ ಎಲ್ಲಾ ಅರ್ಹತೆಗಳನ್ನು ಪೂರೈಸತಕ್ಕದು.<br>2. ಮ್ಯಾನೇಜ್‌ಮೆಂಟ್ ಕೋಟಾದಡಿ ಸೀಟು ಪಡೆದಿರುವ ವಿದ್ಯಾರ್ಥಿಗಳ ಕುಟುಂಬದ ಆದಾಯವನ್ನು ಮಂಜೂರಾತಿ ಪ್ರಾಧಿಕಾರಿಗಳು ಸುದೀರ್ಘವಾಗಿ ಪರಿಶೀಲಿಸಿ ತದನಂತರ ವಿದ್ಯಾರ್ಥಿವೇತನವನ್ನು ಮಂಜೂರು ಮಾಡತಕ್ಕದು.<br>3. ಮಾನೇಜ್‌ಮೆಂಟ್ ಕೋಟಾದಡಿ ಡೋನೇಷನ್ ಸೀಟು ಪಡೆದಿರಬಾರದು.<br>4. ವಿದ್ಯಾರ್ಥಿವೇತನದಲ್ಲಿ ಶುಲ್ಕವನ್ನು ಪಾವತಿ ಮಾಡುವಾಗ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕೋರ್ಸಿಗೆ ಸರ್ಕಾರಿ |

ಸೀಟುಗಳಿಗೆ ನಿಗದಿಪಡಿಸಿದ ಶುಲ್ಕದ ಮೊತ್ತವನ್ನು ಮಾತ್ರ ಪಾವತಿಸತಕ್ಕದು.

2018-19 ಮತ್ತು 2019-20ನೇ ಸಾಲುಗಳಲ್ಲಿ ಪ್ರವೇಶ ಪಡೆದು ಮುಂದುವರೆಯುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಕೋರ್ಸ್ ಮುಗಿಯುವವರೆಗೆ ಮಾತ್ರ ಅನ್ವಯಿಸುವುದು ಎಂದು ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಕ್ರಮವಹಿಸಲಾಗುತ್ತಿದೆ.

**ಆ)** ಕಳೆದ ಮೂರು ವರ್ಷಗಳಲ್ಲಿ ವೈದ್ಯಕೀಯ/ಇಂಜಿನೀಯರಿಂಗ್ ಕೋರ್ಸ್‌ಗಳಿಗೆ ದಾಖಲಾದ ಎಷ್ಟು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಹಾಯಧನ ವಿತರಿಸಲಾಗಿದೆ; (ಜಿಲ್ಲಾವಾರು, ಕಾಲೇಜುವಾರು ವಿವರ ನೀಡುವುದು)

ಕಳೆದ ಮೂರು ವರ್ಷಗಳಲ್ಲಿ ವೈದ್ಯಕೀಯ/ಇಂಜಿನೀಯರಿಂಗ್ ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಡಿ ಆಯ್ಕೆಯಾದ 17279 ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರಾತಿ ನೀಡಿ ರೂ.103,98,89,013/-ಗಳ ವೆಚ್ಚ ಭರಿಸಲಾಗಿರುತ್ತದೆ. ವರ್ಷವಾರು ವಿವರ ಈ ಕೆಳಕಂಡಂತಿದೆ.

| ಕ್ರ ಸಂ | ವರ್ಷ | ಮಂಜೂರಾತಿ ನೀಡಲಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಸಿರುವ ಮೊತ್ತ (ರೂ. ಗಳಲ್ಲಿ) |
|---|---|---|---|
| 01 | 2019-20 | 5689 | 330284897 |
| 02 | 2020-21 | 5597 | 326021970 |
| 03 | 2021-22 | 5993 | 383582146 |
| | **ಒಟ್ಟು** | **17279** | **1039889013** |

ಜಿಲ್ಲಾವಾರು ಮತ್ತು ಕಾಲೇಜುವಾರು ಮಾಹಿತಿಯನ್ನು ಅನುಬಂಧ-1 ರಿಂದ 6 ರಲ್ಲಿ ನೀಡಿದೆ.

**ಇ)** ವೈದ್ಯಕೀಯ/ ಇಂಜಿನೀಯರಿಂಗ್ ಕೋರ್ಸ್‌ಗಳಿಗೆ ದಾಖಲಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುವ ಸೌಲಭ್ಯಗಳೇನು? (ವಿವರ ನೀಡುವುದು)

- ವೈದ್ಯಕೀಯ/ಇಂಜಿನೀಯರಿಂಗ್ ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸರ್ಕಾರ ನಿಗಧಿಪಡಿಸಲಾದ ದರದಲ್ಲಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.
- ಇಂಜಿನಿಯರಿಂಗ್ ಹಾಗೂ ಮೆಡಿಕಲ್ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ರೂ.35,000/- ಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.
- ವಿಶ್ವವಿದ್ಯಾಲಯ ಮಟ್ಟದಲ್ಲಿ ಸ್ನಾತಕೋತ್ತರ ಪದವಿಯಲ್ಲಿ 1 ರಿಂದ 5 ನೇ ರಾಂಕ್ (Rank) ಪಡೆದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ರೂ. 50,000/- ಗಳ ಪ್ರೋತ್ಸಾಹಧನವನ್ನು ನೀಡಲಾಗುವುದು.
- ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ I.I.T/I.I.M/I.I.S.C/N.I.T ಮುಂತಾದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿಯ ರೂ. 2,00,000/- ಗಳನ್ನು ಎರಡು ಕಂತುಗಳಲ್ಲಿ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

ಸಕಇ 513 ಎಸ್‌ಟಿಪಿ 2022

(ಬಿ. ಶ್ರೀರಾಮುಲು)
ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು